# ಜಿಲೆಟಿನ್ ಸ್ಫೋಟ 6 ಮಂದಿ ಸಾವು

## ಚಿಕ್ಕಬಳ್ಳಾಪುರದಲ್ಲಿ ದುರ್ಘಟನೆ



ದುರಂತ ನಡೆದ ಸ್ಥಳವಲ್ಲಿ ಪೊಲೀಸರಿಂದ ಅವಶೇಷಗಳ ಪರಿಶೀಲನೆ.

**ಚಿಕ್ಕಬಳ್ಳಾಪುರ:** ಶಿವಮೊಗ್ಗದ ಗಣಿ ದುರಂತ ನೆನಪಲ್ಲಿರುವಾಗಲೇ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜಿಲೆಟಿನ್ ಸ್ಫೋಟ ಸಂಭವಿಸಿ ಆರು ಮಂದಿ ಮೃತಪಟ್ಟಿರುವ ಹೃದಯ ವಿದ್ರಾವಕ ಘಟನೆ ಸಂಭವಿಸಿದೆ.

ಚಿಕ್ಕಬಳ್ಳಾಪುರ ತಾಲೂಕಿನ ಹಿರೇನಾಗವೇಲಿ ಗ್ರಾಮದ ಭ್ರಮರವಾಸಿನಿ ಕ್ರಷರ್ ಸಮೀಪದ ಅರಣ್ಯ ಪ್ರದೇಶದಲ್ಲಿ ಅಕ್ರಮವಾಗಿ ಶೇಖರಿಸಿಟ್ಟಿದ್ದ ಜಿಲೆಟಿನ್ ಕಡ್ಡಿಗಳನ್ನು ಸಾಗಿಸುವ ವೇಳೆ ಸ್ಫೋಟ ಸಂಭವಿಸಿತು. ಘಟನೆಯಲ್ಲಿ ಮೃತಪಟ್ಟವರನ್ನು ಕ್ರಷರ್ ಎಂಜಿನಿಯರ್ ಉಮಾಕಾಂತ್, ಕಂಪ್ಯೂಟರ್ ಆಪರೇಟರ್ ಗಂಗಾಧರ್, ವೇಯರ್ ಮುರುಳಿ, ವಾಚ್‌ಮನ್ ಮಹೇಶ್, ಹಿರೇನಾಗವೇಲಿ ಗ್ರಾಮದ ರಾಮು, ಕಾರ್ಮಿಕ ಅಭಿ ಎಂದು ಗುರುತಿಸಲಾಗಿದೆ. ಟಾಟಾ ಏಸ್ ಚಾಲಕ ರಿಯಾಜ್ ಗಂಭೀರವಾಗಿ ಗಾಯಗೊಂಡಿದ್ದಾರೆ. ಮೃತರ ಕುಟುಂಬಗಳಿಗೆ ತಲಾ ಐದು ಲಕ್ಷ ರೂ. ಪರಿಹಾರ ನೀಡಲಾಗುವುದು ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಪ್ರಕಟಿಸಿದ್ದಾರೆ.

**ದೇಹ ಛಿದ್ರ ಛಿದ್ರ:** ಮೃತರು ಟಾಟಾಏಸ್ ಹಾಗೂ ಒಂದು ಬೈಕ್ ಮೂಲಕ ಅರಣ್ಯ ಪ್ರದೇಶಕ್ಕೆ ತೆರಳಿ ಅಲ್ಲಿ ಅಕ್ರಮವಾಗಿ ಅಡಗಿಸಿಟ್ಟಿದ್ದ ಜಿಲೆಟಿನ್ ಹಾಗೂ ಎಲೆಕ್ಟ್ರಿಕ್ ಡಿಟೋನೇಟರ್ಸ್ ಹೊತ್ತು ತರಲು ಮುಂದಾಗಿದ್ದ ವೇಳೆ ಘಟನೆ ಸಂಭವಿಸಿದೆ. ಸ್ಫೋಟದಿಂದ ಅಗ್ನಿಯ ಜ್ವಾಲೆ ಆಕಾಶಕ್ಕೆ ಚಿಮ್ಮಿದರೆ, ಮೃತರ ದೇಹದ ಭಾಗಗಳು ಛಿದ್ರಛಿದ್ರವಾಗಿ ನೂರಾರು ಮೀಟರ್ ದೂರ ಚೆಲ್ಲಾಪಿಲ್ಲಿ ಬಿದ್ದಿತ್ತು. ಘಟನಾ ಸ್ಥಳಕ್ಕೆ ಸಚಿವರಾದ ಬಸವರಾಜ ಬೊಮ್ಮಾಯಿ, ಡಾ.ಕೆ ಸುಧಾಕರ್, ಮುರುಗೇಶ್ ನಿರಾಣಿ, ವಿರೋಧ ಪಕ್ಷದ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ನೀಡಿ ಪರಿಶೀಲಿಸಿದರು.

## ಸಿಐಡಿ ತನಿಖೆಗೆ

ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು ಸಿಐಡಿ ತನಿಖೆ ನಡೆಸಲಾಗುವುದು ಎಂದು ಗೃಹಸಚಿವ ಬಸವರಾಜ ಬೊಮ್ಮಾಯಿ ತಿಳಿಸಿದರು. ಘಟನಾ ಸ್ಥಳಕ್ಕೆ ಭೇಟಿ ನೀಡಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ ಒಯ್ದು ತಪ್ಪಿತಸ್ಥರನ್ನು ಶಿಕ್ಷೆಗೆ ಗುರಿಪಡಿಸುವುದಾಗಿ ಹೇಳಿದರು. ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಠಿಣ ಕ್ರಮ ಜರುಗಿಸುತ್ತೇನೆ. ಯಾರನ್ನೂ ರಕ್ಷಣೆ ಮಾಡುವ ಪ್ರಶ್ನೆಯೇ ಇಲ್ಲ ಎಂದು ಹೇಳಿದ್ದಾರೆ.

> ಪ್ರಕರಣದಲ್ಲಿ ಯಾರೇ ಭಾಗಿಯಾಗಿದ್ದರೂ ಕ್ರಮ ಕೈಗೊಳ್ಳುತ್ತೇವೆ. ಸಿದ್ದರಾಮಯ್ಯನವರಿಗೆ ಆರೋಪ ಮಾಡುವುದೇ ಕೆಲಸ.
> • ಬಿ.ಎಸ್. ಯಡಿಯೂರಪ್ಪ ಮುಖ್ಯಮಂತ್ರಿ